# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಕಡೂರು

## ಸಿ.ಸಿ.1534/2019

| | | | |
|---|---|---|---|
| ಸಾಕ್ಷಿದಾರರ ಹೆಸರು | ಗೌಸ್ ಪೀರ್ | ಪ್ರಮಾಣ ಮಾಡಿದ ದಿನಾಂಕ | 07.08.2023 |
| ತಂದೆಯ ಹೆಸರು | ಅಬ್ದುಲ್ ಗಫಾರ್ ಸಾಬ್ | | |
| ವಯಸ್ಸು | 34 ವರ್ಷ | | |
| ವೃತ್ತಿ | ವ್ಯವಸಾಯ | ಚಾಸಾ | 3 |
| ವಾಸಸ್ಥಳ | ಕರೇನಹಳ್ಳಿ | ಪ್ರಾಸಾ | 2 |

**ಮುಖ್ಯ ವಿಚಾರಣೆ :ಮಾನ್ಯ ಎಪಿಪಿಯವರಿಂದ :-**

ಈ ಪ್ರಕರಣದ ಬಗ್ಗೆ ನನಗೆ ಏನೂ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ಪಂಚನಾಮ ಕ್ರಮವನ್ನು ಜರುಗಿಸಿರುವುದಿಲ್ಲ ಹಾಗೂ ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರ್ತಿಸಿದ್ದು ಅದು ಪಂಚನಾಮೆಯಾಗಿದ್ದು ಅದನ್ನು ಈಗಾಗಲೇ ನಿಪಿ 1 ಎಂದು ಗುರುತಿಸಲಾಗಿದ್ದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ 1(ಬಿ) ಎಂದು ಗುರ್ತಿಸಲಾಯಿತು. ನಿಪಿ 1 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಿಪಿ 1 ಕ್ಕೆ ನಾನು ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಯಾವ ವಿಚಾರಕ್ಕಾಗಿ ಎಂದು ನನಗೆ ಗೊತ್ತಿಲ್ಲ. ಮಹಜರನ್ನು ಎಷ್ಟು ಗಂಟೆಯಿಂದ ಎಷ್ಟು ಗಂಟೆಯವರೆಗು ಬರೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

ಸಾಕ್ಷಿಗೆ ಮಹಜರ್ ಗೆ ಸಹಕರಿಸಲು ನೀಡಿದ ನೋಟೀಸನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯ ಸಾಕ್ಷಿ ಹೇಳಿಕೆ ಬಾಂಡ್ ನಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆಯನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು

ನಿಪಿ-3(ಬಿ) ಎಂದು ಗುರುತಿಸಲಾಯಿತು. ನಿಪಿ-2 ಮತ್ತು 3 ರಲ್ಲಿರುವ ವಿಚಾರಗಳು ಗೊತ್ತಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು , ಅನುಮತಿ ನೀಡಲಾಗಿದೆ)

**<u>ಪಾಟೀ ಸವಾಲು :- ಮಾನ್ಯ ಎಪಿಪಿಯವರಿಂದ :-</u>**

ದಿ:15.11.2018 ರಂದು ಪೋಲೀಸರು ನನ್ನ ಹಾಗೂ ಚಾಸಾ-2 ರವರ ಸಮಕ್ಷಮ ಚಾಸಾ-4 ರವರು ತೋರಿಸಿದ ಸ್ಥಳದಲ್ಲಿ ಸ್ಥಳ ಪಂಚನಾಮೆಯನ್ನು ಬೆಳಗ್ಗೆ 8.00 ರಿಂದ 8.30 ಗಂಟೆಯವರೆಗು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಮಹಜರ್ ಗೆ ಸಹಕರಿಸುವಂತೆ ನಿಪಿ-2 ರಂತೆ ನೋಟಿಸು ನೀಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-3 ರಂತೆ ಸಾಕ್ಷಿ ಹೇಳಿಕೆಯ ಬಾಂಡನ್ನು ಪಡೆದಿರುತ್ತಾರೆ ಎದರೆ ಸರಿಯಲ್ಲ. ನಿಪಿ-1 ರಿಂದ 3 ರ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು :- ಆರೋಪಿಗಳ ಪರ ವಕೀಲರು ಯಾವುದೇ ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದಿರುತ್ತಾರೆ.**

**<u>ಮರು ವಿಚಾರಣೆ: ಇರುವುದಿಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

ಸಹಿ/-
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಕಡೂರು